**All India Radio: Bangalore**
**National Bulletin In Kannada**
**11.10.2025  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**11.10.2025  1.10 p.m.**

**<><><><>**

ಮುಖ್ಯಾಂಶಗಳು

1. ನವದೆಹಲಿಯಲ್ಲಿ ಧನಧಾನ್ಯ ಕೃಷಿ ಯೋಜನೆಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ; ಬೇಳೆಕಾಳುಗಳಲ್ಲಿ ಸ್ವಾವಲಂಬನೆ ಉಪಕ್ರಮ ಅನಾವರಣ
2. ಮಹಾತ್ಮ ಗಾಂಧೀಜಿ ಅವರಿಂದ ಸ್ಥಾಪಿತ ಗುಜರಾತ್ ವಿದ್ಯಾಪೀಠದ ೭೧ನೇ ಘಟಿಕೋತ್ಸವದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಗಿ
3. ಅಫ್ಘಾನ್ ಪತ್ರಿಕಾಗೋಷ್ಠಿಯಲ್ಲಿ ಮಹಿಳಾ ಅನುಪಸ್ಥಿತಿ ವಿವಾದ; ತನ್ನ ಪಾತ್ರವಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟನೆ
4. ವೆಸ್ಟ್ ಇಂಡೀಸ್ ವಿರುದ್ಧದ ಟೆಸ್ಟ್ ಸರಣಿ; ಮೊದಲ ಇನ್ನಿಂಗ್ಸ್‌ನಲ್ಲಿ ಬೃಹತ್ ಮೊತ್ತದತ್ತ ಭಾರತ

<><><><>

ನವದೆಹಲಿಯಲ್ಲಿಂದು ಪ್ರಧಾನಮಂತ್ರಿ ನರೇಂದ್ರ ಮೋದಿ, ೪೨ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೊತ್ತದ ಕೃಷಿ ಮತ್ತು ಸಂಬಂಧಿತ ವಲಯಗಳಲ್ಲಿನ ಹಲವು ಯೋಜನೆ ಹಾಗೂ ಉಪಕ್ರಮಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಿದರು. ೨೪ ಸಾವಿರ ಕೋಟಿ ರೂಪಾಯಿ ಅನುದಾನದೊಂದಿಗೆ ಪಿಎಂ-ಧನಧಾನ್ಯ ಯೋಜನೆ ಮತ್ತು ೧೧ ಸಾವಿರ ಕೋಟಿ ರೂಪಾಯಿಗೂ ಅಧಿಕ ಅನುದಾನದೊಂದಿಗೆ ಬೇಳೆ ಕಾಳು ಉತ್ಪಾದನೆಯಲ್ಲಿ ಸ್ವಾವಲಂಬನೆ ಯೋಜನೆಗಳಿಗೆ ಇಂದು ಚಾಲನೆ ನೀಡಿದರು. ಕಡಿಮೆ ಉತ್ಪಾದಕತೆ ಇರುವ ೧೦೦ ಜಿಲ್ಲೆಗಳಲ್ಲಿ ಪಿಎಂ ಧನಧಾನ್ಯ ಕೃಷಿ ಯೋಜನೆಯಡಿ ರೈತರ ಆದಾಯ ಗಮನಾರ್ಹವಾಗಿ ಹೆಚ್ಚಿಸುವಂತೆ ಸಮಗ್ರ ಕೃಷಿ ಅಭಿವೃದ್ಧಿ ಕೈಗೊಳ್ಳಲಾಗುವುದು. ಹೊಲಗಳಿಗೆ ನೀರಾವರಿ ಸೌಲಭ್ಯ, ಸಾಲಸೌಲಭ್ಯ ಹಾಗೂ ದಾಸ್ತಾನು ಮೂಲಸೌಕರ್ಯ ಖಾತರಿ ಪಡಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ. ತೊಗರಿ ಬೇಳೆ, ಉದ್ದಿನ ಬೇಳೆ ಹಾಗೂ ಮಸೂರ್ ದಾಲ್‌ಗಳಂತಹ ಪ್ರಮುಖ

ದ್ವಿದಳ ಧಾನ್ಯಗಳ ಉತ್ಪಾದನೆಯನ್ನು ಹೆಚ್ಚಿಸುವುದು ದ್ವಿದಳ ಧಾನ್ಯ ಮಿಷನ್‌ನ ಉದ್ದೇಶವಾಗಿದೆ. ಈ ಯೋಜನೆಯಡಿ ನೋಂದಾಯಿತ ರೈತರ ಉತ್ಪನ್ನಗಳನ್ನು ಪೂರ್ಣ ಪ್ರಮಾಣದಲ್ಲಿ ಕನಿಷ್ಠ ಬೆಂಬಲ ಬೆಲೆ ನೀಡುವ ಕೇಂದ್ರೀಯ ಸಂಸ್ಥೆಗಳು ಖರೀದಿಸಲಿವೆ. ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ೨೦೧೪ರ ನಂತರ ವೇಗವಾದ ಅಭಿವೃದ್ಧಿಗಾಗಿ ಕೃಷಿ ವ್ಯವಸ್ಥೆಯಲ್ಲಿ ಸುಧಾರಣೆಗಳನ್ನು ಮಾಡಲಾಗಿದೆ. ಬಿತ್ತನೆ ಬೀಜಗಳಿಂದ ಮಾರುಕಟ್ಟೆಯ ವರೆಗೆ ರೈತರ ಹಿತಕ್ಕಾಗಿ ಆಮೂಲಾಗ್ರ ಬದಲಾವಣೆಗಳನ್ನು ಮಾಡಲಾಗಿದೆ. ಕಳೆದ ೧೧ ವರ್ಷಗಳಲ್ಲಿ ಭಾರತದ ಕೃಷಿ ರಫ್ತು ಎರಡು ಪಟ್ಟು ಹೆಚ್ಚಿದೆ. ಧಾನ್ಯಗಳ ಉತ್ಪಾದನೆ ೯೦೦ ಲಕ್ಷ ಮೆಟ್ರಿಕ್ ಟನ್ ಹೆಚ್ಚಾಗಿದೆ. ಹಣ್ಣು ಮತ್ತು ತರಕಾರಿಗಳ ಉತ್ಪಾದನೆ ೬೪೦ ಲಕ್ಷ ಮೆಟ್ರಿಕ್ ಟನ್‌ಗೂ ಅಧಿಕವಾಗಿದೆ ಎಂದು ಹೇಳಿದರು.

ಇಂದು ಭಾರತ ಹಾಲು ಉತ್ಪಾದನೆಯಲ್ಲಿ ವಿಶ್ವದಲ್ಲೇ ಅಗ್ರಸ್ಥಾನದಲ್ಲಿದೆ ಹಾಗೂ ವಿಶ್ವದ ಎರಡನೇ ಅತಿದೊಡ್ಡ ಮತ್ಸ್ಯ ಉತ್ಪಾದನಾ ರಾಷ್ಟ್ರವಾಗಿದೆ ಎಂದು ತಿಳಿಸಿದರು.

**ಧ್ವನಿ : ನರೇಂದ್ರ ಮೋದಿ (೩೩ ಸೆಕೆಂಡ್‌ಗಳು)**

ಇದಕ್ಕೂ ಮುನ್ನ ಪ್ರಧಾನಿ, ನವದೆಹಲಿಯ ಭಾರತೀಯ ಕೃಷಿ ಸಂಶೋಧನಾ ಸಂಸ್ಥೆಯಲ್ಲಿ ಕೃಷಿಕರೊಂದಿಗೆ ಸಂವಾದ ನಡೆಸಿದರು.

<><><>

ಮೂರು ದಿನಗಳ ಗುಜರಾತ್ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ದ್ವಾರಕಾದಲ್ಲಿ ದ್ವಾರಕಾಧೀಶ ದೇಗುಲಕ್ಕೆ ಭೇಟಿ ನೀಡಿ, ಪ್ರಾರ್ಥನೆ ಸಲ್ಲಿಸಲಿದ್ದಾರೆ. ಬಳಿಕ ಅವರು, ಅಹಮದಾಬಾದ್‌ಗೆ ತೆರಳಲಿದ್ದು, ಗುಜರಾತ್ ವಿದ್ಯಾಪೀಠದ ೭೧ನೇ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಮಹಾತ್ಮ ಗಾಂಧೀಜಿ ಅವರೇ ೧೯೨೦ರಲ್ಲಿ ಸ್ಥಾಪಿಸಿದ ಈ ಗುಜರಾತ್ ವಿದ್ಯಾಪೀಠ ಇಂದಿಗೂ ಗಾಂಧಿ ತತ್ವ ಮತ್ತು ಶಿಕ್ಷಣವನ್ನು ಉತ್ತೇಜಿಸುತ್ತಿದೆ. ಈ ಹಿನ್ನೆಲೆಯಲ್ಲಿ ರಾಷ್ಟ್ರಪತಿಗಳ ಭೇಟಿ ವಿಶೇಷತೆ ಪಡೆದಿದೆ. ನಿನ್ನೆ ರಾಷ್ಟ್ರಪತಿ ಐತಿಹಾಸಿಕ ಸೋಮನಾಥ್ ಮಂದಿರಕ್ಕೆ ಭೇಟಿ ನೀಡಿ, ಪೂಜೆ ಸಲ್ಲಿಸಿದರು. ಇದೇ ವೇಳೆ ಮಂದಿರದ ಬಳಿ ಇರುವ ಸರ್ದಾರ್ ವಲ್ಲಭ ಭಾಯ್ ಪಟೇಲ್ ಅವರ ಪ್ರತಿಮೆಗೂ ಪುಷ್ಪನಮನ ಸಲ್ಲಿಸಿದರು. ಗುಜರಾತ್ ಭೇಟಿಯ ಭಾಗವಾಗಿ ರಾಷ್ಟ್ರಪತಿ ನಿನ್ನೆ ಗಿರ್ ರಾಷ್ಟ್ರೀಯ ಉದ್ಯಾನವಕ್ಕೆ ಭೇಟಿ ನೀಡಿ, ಸಾಸನ್‌ಗಿರ್‌ನಲ್ಲಿ ಸ್ಥಳೀಯ ಬುಡಕಟ್ಟು ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಿದರು.

<><><>

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಮತ್ತು ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಹಿರಿಯ ನಾಯಕ ಲೋಕನಾಯಕ ಜಯಪ್ರಕಾಶ್ ನಾರಾಯಣ್ ಅವರ ಜನ್ಮ ವಾರ್ಷಿಕೋತ್ಸವದಂದು ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ಜಯಪ್ರಕಾಶ್ ನಾರಾಯಣ್, ಪ್ರಜಾಪ್ರಭುತ್ವ ಮೌಲ್ಯಗಳು, ನಾಗರಿಕ ಸ್ವಾತಂತ್ರ್ಯ ಮತ್ತು ಜನರ ಸಬಲೀಕರಣಕ್ಕೆ ಬದ್ಧರಾಗಿದ್ದ ದಾರ್ಶನಿಕ ನಾಯಕರಾಗಿದ್ದರು ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಸ್ಮರಿಸಿದ್ದಾರೆ. ತಮ್ಮ ಸಂದೇಶದಲ್ಲಿ ಪ್ರಧಾನಿ, ಸಾಮಾನ್ಯ ನಾಗರಿಕರನ್ನು ಸಬಲೀಕರಣಗೊಳಿಸುವಲ್ಲಿ ಮತ್ತು ಭಾರತದ ಸಂವಿಧಾನದ ಸಮಗ್ರತೆಯನ್ನು ರಕ್ಷಿಸುವಲ್ಲಿ ಜಯಪ್ರಕಾಶ್ ನಾರಾಯಣ್ ಮಹತ್ವದ ಪಾತ್ರವಹಿಸಿದ್ದರು. ಗುಜರಾತ್ ಮತ್ತು ಬಿಹಾರದಲ್ಲಿ ಜಯಪ್ರಕಾಶ್ ನಾರಾಯಣ್ ನೇತೃತ್ವದ ಚಳುವಳಿಗಳು ದೇಶಾದ್ಯಂತ ಸಾಮಾಜಿಕ-ರಾಜಕೀಯ ಜಾಗೃತಿಗೆ ಪ್ರೇರಣೆ ನೀಡಿವೆ ಎಂದು ತಿಳಿಸಿದ್ದಾರೆ. ಬಿಜೆಪಿ ರಾಷ್ಟ್ರಾಧ್ಯಕ್ಷ ಜೆ.ಪಿ. ನಡ್ಡಾ, ಹಿರಿಯ ನಾಯಕ ಜಯಪ್ರಕಾಶ್ ನಾರಾಯಣ್ ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ.

<><><><>

ಭಾರತ ರತ್ನ ಪ್ರಶಸ್ತಿ ಪುರಸ್ಕೃತ ನಾನಾಜಿ ದೇಶಮುಖ್ ಅವರ ಜನ್ಮ ದಿನಾಚರಣೆಯ ಪ್ರಯುಕ್ತ ಅವರಿಗೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಇಂದು ಗೌರವ ನಮನ ಸಲ್ಲಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ನಾನಾಜಿ ಅವರ ನಿಸ್ವಾರ್ಥ ಸೇವೆಯ ತತ್ವಗಳು, ಪ್ರಾಮಾಣಿಕತೆ ಮತ್ತು ಸಮರ್ಪಣೆಯೊಂದಿಗೆ ರಾಷ್ಟ್ರಕ್ಕೆ ಸೇವೆ ಸಲ್ಲಿಸಲು ಎಲ್ಲರಿಗೂ ಪ್ರೇರಣೆ ನೀಡುತ್ತಿವೆ ಎಂದು ಹೇಳಿದ್ದಾರೆ.

<><><><>

ನವದೆಹಲಿಯಲ್ಲಿ ನಡೆದ ಅಫ್ಘಾನಿಸ್ತಾನ ವಿದೇಶಾಂಗ ಸಚಿವ ಅಮೀರ್‌ಖಾನ್ ಮುಕ್ತಕಿ ಅವರ ಪತ್ರಿಕಾಗೋಷ್ಠಿಯಲ್ಲಿ ಮಹಿಳಾ ಪತ್ರಕರ್ತರ ಅನುಪಸ್ಥಿತಿ ಕುರಿತ ವಿವಾದದ ಬೆನ್ನಲ್ಲೇ, ಈ ಘಟನೆಯಲ್ಲಿ ತನ್ನ ಯಾವುದೇ ಪಾತ್ರವಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ. ಅಫ್ಘಾನ್ ಸಚಿವರ ಭೇಟಿಗಾಗಿ ಹಾಗೂ ಪತ್ರಿಕಾಗೋಷ್ಠಿಗೆ ದೆಹಲಿಯಲ್ಲಿ ನೆಲೆಸಿರುವ ಆಯ್ದ ಕೆಲವು ಪತ್ರಕರ್ತರಿಗೆ ಮಾತ್ರ ಮುಂಬೈನಲ್ಲಿರುವ ಅಫ್ಘನ್ ರಾಯಭಾರ ಕಚೇರಿ ಆಹ್ವಾನ ಕಳುಹಿಸಿತ್ತು ಎಂದು ಸಚಿವಾಲಯ ಸ್ಪಷ್ಟಪಡಿಸಿದೆ. ಈ ವಿವಾದಕ್ಕೆ ಸಂಬಂಧಪಟ್ಟಂತೆ ಹಲವು ಪತ್ರಕರ್ತರು ಮತ್ತು ವಿರೋಧ ಪಕ್ಷದ ನಾಯಕರು ಕೇಂದ್ರದಿಂದ ಸ್ಪಷ್ಟನೆ ಕೇಳಿದ್ದರು. ಕಾಂಗ್ರೆಸ್ ನಾಯಕಿ

ಪ್ರಿಯಾಂಕ ಗಾಂಧಿ ವಾದ್ರಾ, ಭಾರತದ ಕೆಲವು ಸಮರ್ಥ ಮಹಿಳೆಯರು ಎದುರಿಸಿರುವ ಅವಮಾನವನ್ನು ಖಂಡಿಸಿ, ಪ್ರಧಾನಿ ನರೇಂದ್ರ ಮೋದಿ ತಮ್ಮ ನಿಲುವು ಸ್ಪಷ್ಟಪಡಿಸುವಂತೆ ಆಗ್ರಹಿಸಿದ್ದಾರೆ.

<><><>

ಇಂದು ಅಂತಾರಾಷ್ಟ್ರೀಯ ಹೆಣ್ಣು ಮಕ್ಕಳ ದಿನ. "ಹುಡುಗಿಯಾದ ನಾನು ಪರಿವರ್ತನೆಯನ್ನು ಮುನ್ನಡೆಸುವೆ: ಬಿಕ್ಕಟ್ಟಿನ ಮುಂಚೂಣಿಯಲ್ಲಿ ಹೆಣ್ಣು ಮಕ್ಕಳು" ಎಂಬುದು ಈ ವರ್ಷದ ಧ್ಯೇಯ ವಾಕ್ಯವಾಗಿದೆ. ಈ ದಿನದ ಅಂಗವಾಗಿ ಹಲವು ರಾಜಕೀಯ ನಾಯಕರು ಮತ್ತು ಸಂಸ್ಥೆಗಳು, ಶಿಕ್ಷಣ, ಸುರಕ್ಷತೆ ಮತ್ತು ಸಮಾನ ಅವಕಾಶಗಳ ಮೂಲಕ ಹೆಣ್ಣು ಮಕ್ಕಳ ಸಬಲೀಕರಣದೆಡೆಗೆ ಬದ್ಧತೆಯನ್ನು ಪುನರುಚ್ಛರಿಸುತ್ತಿವೆ.

<><><>

ಮೆಹ್ಸಾನಾದಲ್ಲಿ ನಡೆದ ಮೊದಲ ವೈಬ್ರೆಂಟ್ ಗುಜರಾತ್ ಪ್ರಾದೇಶಿಕ ಸಮ್ಮೇಳನದಲ್ಲಿ ಒಂದು ಸಾವಿರದ ೨೦೦ಕ್ಕೂ ಹೆಚ್ಚು ತಿಳುವಳಿಕಾ ಒಪ್ಪಂದಗಳಿಗೆ ಸಹಿ ಹಾಕಲಾಯಿತು, ಇದು ಉತ್ತರ ಗುಜರಾತ್ ಪ್ರದೇಶದಲ್ಲಿ ಅಂದಾಜು ೩.೨೪ ಲಕ್ಷ ಕೋಟಿ ರೂಪಾಯಿ ಹೂಡಿಕೆಗೆ ದಾರಿ ಮಾಡಿಕೊಟ್ಟಿದೆ. ಸಮಾರೋಪ ಅಧಿವೇಶನವನ್ನುದ್ದೇಶಿಸಿ ಮಾತನಾಡಿದ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್, ಪ್ರಧಾನಿ ನರೇಂದ್ರ ಮೋದಿಯವರ 'ವಿಕಸಿತ ಗುಜರಾತ್ ಮೂಲಕ ವಿಕಸಿತ ಭಾರತ' ಎಂಬ ದೃಷ್ಟಿಕೋನಕ್ಕೆ ಅನುಗುಣವಾಗಿ ಕೈಗಾರಿಕಾ ಬೆಳವಣಿಗೆಯ ಕೇಂದ್ರವಾಗಿ ಉತ್ತರ ಗುಜರಾತ್‌ನ ಸಾಮರ್ಥ್ಯವನ್ನು ಸಮ್ಮೇಳನವು ಪ್ರದರ್ಶಿಸಿದೆ ಎಂದು ಹೇಳಿದರು.

<><><>

ಗುವಾಹತಿಯ ಬರ್ಸಾಪಾರ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ವಿಶ್ವಕಪ್‌ನ ೧೧ನೇ ಪಂದ್ಯದಲ್ಲಿ ನ್ಯೂಜಿಲೆಂಡ್ ತಂಡ, ಬಾಂಗ್ಲಾದೇಶದ ವಿರುದ್ಧ ೧೦೦ ರನ್‌ಗಳಿಂದ ಬೃಹತ್ ಜಯ ಸಾಧಿಸಿದೆ.  ಇಂದು ಶ್ರೀಲಂಕಾದ ಕೊಲಂಬೋದಲ್ಲಿನ ಆರ್. ಪ್ರೇಮದಾಸ ಅಂತಾರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುವ ಪಂದ್ಯದಲ್ಲಿ ಇಂಗ್ಲೆಂಡ್ ಹಾಗೂ ಶ್ರೀಲಂಕಾ ವನಿತೆಯರ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಅಪರಾಹ್ನ ೩ ಗಂಟೆಗೆ ಆರಂಭವಾಗಲಿದೆ.

<><><>

ಉತ್ತರಾಖಂಡದಲ್ಲಿ 'ಯುವ ಆಪ್‌ದಾ ಮಿತ್ರ' ಯೋಜನೆಯನ್ನು ಪ್ರಾರಂಭಿಸಲಾಗಿದೆ. ಈ ಉಪಕ್ರಮದಡಿಯಲ್ಲಿ, ರಾಜ್ಯಾದ್ಯಂತ ೪ ಸಾವಿರದ ೩೧೦ ಯುವ ಸ್ವಯಂಸೇವಕರಿಗೆ ಭೂಕಂಪ, ಪ್ರವಾಹ ಮತ್ತು ಭೂಕುಸಿತಗಳಂತಹ ನೈಸರ್ಗಿಕ ವಿಕೋಪಗಳನ್ನು ನಿಭಾಯಿಸಲು ತರಬೇತಿ ನೀಡಲಾಗುವುದು.

<><><><>

ನವದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಎರಡನೇ ಟೆಸ್ಟ್ ಕ್ರಿಕೆಟ್ ಪಂದ್ಯದ ಎರಡನೇ ದಿನವಾದ ಇಂದು ಭಾರತ ವೆಸ್ಟ್ ಇಂಡೀಸ್ ವಿರುದ್ಧ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ಬೃಹತ್ ಮೊತ್ತದತ್ತ ಸಾಗಿದೆ. ಇತ್ತೀಚಿನ ವರದಿ ಬಂದಾಗ ೦೪ ವಿಕೆಟ್ ನಷ್ಟಕ್ಕೆ ೫೧೮ ರನ್‌ಗಳಿಸಿ ಆಡುತ್ತಿದೆ. ನಿನ್ನೆ ದಿನದ ಅಂತ್ಯಕ್ಕೆ ಆರಂಭಿಕ ಬ್ಯಾಟರ್ ಯಶಸ್ವಿ ಜೈಸ್ವಾಲ್ ಅಜೇಯ ೧೭೩ ರನ್ ನೆರವಿನೊಂದಿಗೆ ಭಾರತ ಎರಡು ವಿಕೆಟ್ ನಷ್ಟಕ್ಕೆ ೩೧೮ ರನ್‌ಗಳಿಸಿತ್ತು. ಇನ್ನಿಂಗ್ಸ್‌ನಲ್ಲಿ ಸಾಯಿ ಸುದರ್ಶನ್ ೮೭ ರನ್ ಹಾಗೂ ಕೆ.ಎಲ್. ರಾಹುಲ್ ೩೮ ರನ್ ಗಳಿಸಿ ಮೊತ್ತವನ್ನು ಹಿಗ್ಗಿಸಿದರು. ಇಂದು ಉತ್ತಮ ಬ್ಯಾಟಿಂಗ್ ಪ್ರದರ್ಶನದೊಂದಿಗೆ ಶುಭ್‌ಮನ್‌ಗಿಲ್ ಶತಕ ಸಿಡಿಸಿದರು. ಈ ಪಂದ್ಯದಲ್ಲಿ ಗೆಲುವು ಸಾಧಿಸುವ ಮೂಲಕ ಭಾರತ ತಂಡ ಸರಣಿ ವಶಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>